# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 507

2) ಮಾನ್ಯ ಸದಸ್ಯರ ಹೆಸರು : ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

3) ಉತ್ತರಿಸುವ ದಿನಾಂಕ : 14/08/2025

4) ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಪ್ರಸ್ತುತ ಎಷ್ಟು ಪೊಲೀಸ್ ಠಾಣೆಗಳಿವೆ; ಇವುಗಳನ್ನು ಮೇಲ್ದರ್ಜೆಗೇರಿಸುವ ಉದ್ದೇಶ ಸರ್ಕಾರದ ಮುಂದೆ ಇದೆಯೇ; ಇದ್ದಲ್ಲಿ ಇದುವರೆವಿಗೂ ಯಾವ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ; (ವಿವರ ನೀಡುವುದು) | ಕಲಬುರಗಿ ಜಿಲ್ಲೆಯಲ್ಲಿ ಒಟ್ಟು 28 ಪೊಲೀಸ್ ಠಾಣೆಗಳು ಮತ್ತು ಯಾದಗಿರಿ ಜಿಲ್ಲೆಯಲ್ಲಿ ಒಟ್ಟು 16 ಪೊಲೀಸ್ ಠಾಣೆಗಳು ಕಾರ್ಯನಿರ್ವಹಿಸುತ್ತಿವೆ.<br><br>ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿನ ಪೊಲೀಸ್ ಠಾಣೆಗಳನ್ನು ಮೇಲ್ದರ್ಜೆಗೇರಿಸುವ ಕುರಿತು ಯಾವುದೇ ಪ್ರಸ್ತಾವನೆಯು ಪರಿಶೀಲನೆಯಲ್ಲಿರುವುದಿಲ್ಲ. |
| ಆ) | ಕಲಬುರಗಿ ನಗರ ಪೊಲೀಸ್ ಆಯುಕ್ತಾಲಯದ ವ್ಯಾಪ್ತಿಯಲ್ಲಿರುವ ಹಾಗೂ ಯಾದಗಿರಿ ಜಿಲ್ಲೆಯಲ್ಲಿರುವ ಪೊಲೀಸ್ ಠಾಣೆಗಳನ್ನು ಒಳಗೊಂಡಂತೆ ಜನಸಂಖ್ಯೆಗೆ ಅನುಗುಣವಾಗಿ ಪೊಲೀಸ್ ಸಂಖ್ಯಾ ಬಲ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದಲ್ಲಿ, ಪೊಲೀಸ್ ಸಂಖ್ಯಾ ಬಲವನ್ನು ಹೆಚ್ಚಿಸಲು ಸರ್ಕಾರ ಇದುವರೆವಿಗೂ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ಕಲಬುರಗಿ ನಗರ ವ್ಯಾಪ್ತಿಯಲ್ಲಿನ ಪೊಲೀಸ್ ಅಧಿಕಾರಿ/ಸಿಬ್ಬಂದಿ ಬಲವನ್ನು ಹೆಚ್ಚಿಸುವ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ. |
| ಇ) | ಸದರಿ ಜಿಲ್ಲೆಗಳಲ್ಲಿ ಶಿಥಿಲಗೊಂಡ ಪೊಲೀಸ್ ಠಾಣೆ ಹಾಗೂ ಸಿಬ್ಬಂದಿಗಳ ವಸತಿ ಗೃಹಗಳನ್ನು ಪುನರ್ ನಿರ್ಮಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ; ಇದ್ದಲ್ಲಿ ಯಾವಾಗ ಪುನರ್ ನಿರ್ಮಿಸಲು ಕ್ರಮಕೈಗೊಳ್ಳಲಾಗುವುದು? | ಕಲಬುರಗಿ ಜಿಲ್ಲೆಯಲ್ಲಿ 2024ನೇ ಸಾಲಿನಲ್ಲಿ ನರೋಣಾ ಪೊಲೀಸ್ ಠಾಣೆಯನ್ನು ಹೊಸದಾಗಿ ನಿರ್ಮಿಸಲಾಗಿರುತ್ತದೆ ಮತ್ತು ಪೊಲೀಸ್ ಗೃಹ-2025 ಯೋಜನೆಯ ಹಂತ-4ರಲ್ಲಿ ಅಫಜಲಪೂರ ಪೊಲೀಸ್ ಠಾಣೆಯ 24 ಪಿ.ಸಿ. ವಸತಿ ಗೃಹಗಳ ಮತ್ತು ಆಳಂದ ಪೊಲೀಸ್ ಠಾಣೆಯ 12 ಪಿ.ಸಿ. ವಸತಿ ಗೃಹಗಳ ಹಾಗೂ ದೇವಲಗಾಣಗಾಪೂರ ಪೊಲೀಸ್ ಠಾಣೆಯ 12 ಪಿ.ಸಿ. ವಸತಿ ಗೃಹಗಳ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದೆ.<br><br>ಯಾದಗಿರಿ ಜಿಲ್ಲೆಯಲ್ಲಿ 2024ನೇ ಸಾಲಿನಲ್ಲಿ ಯಾದಗಿರಿ ನಗರ ಪೊಲೀಸ್ ಠಾಣೆ ಮತ್ತು ಕೆಂಭಾವಿ ಪೊಲೀಸ್ ಠಾಣೆ ಹೊಸದಾಗಿ ನಿರ್ಮಿಸಲಾಗಿರುತ್ತದೆ ಮತ್ತು ಪೊಲೀಸ್ ಗೃಹ-2025 ಯೋಜನೆಯ ಹಂತ-1ರಲ್ಲಿ ಯಾದಗಿರಿ ನಗರದಲ್ಲಿ 72 ಪಿ.ಸಿ. ವಸತಿ ಗೃಹಗಳ ನಿರ್ಮಾಣ ಕಾರ್ಯ ಪೂರ್ಣಗೊಂಡಿರುತ್ತದೆ. ಹಂತ-5ರಲ್ಲಿ ಶೋರಾಪೂರ ಪೊಲೀಸ್ ಠಾಣೆಯ 12 ಪಿ.ಸಿ. ವಸತಿ ಗೃಹಗಳನ್ನು ನಿರ್ಮಾಣ ಮಾಡಲು ಪರಿಗಣಿಸಲಾಗಿದ್ದು, ಟೆಂಡರ್ ಆಹ್ವಾನಿಸಲಾಗಿದೆ. |

| | | |
|---|---|---|
| | | ಕಲಬುರಗಿ ನಗರದ ಗ್ರಾಮಾಂತರ ಪೊಲೀಸ್ ಠಾಣೆ (ಸಬ್ ಅರ್ಬನ್ ಪೊಲೀಸ್ ಠಾಣೆ) ಶಿಥಿಲಾವಸ್ಥೆಯಲ್ಲಿದ್ದು, ಸರ್ಕಾರದ ಪತ್ರ ಸಂಖ್ಯೆ: ಹೆಚ್‌ಡಿ/74/ಪಿಬಿಎಲ್/2024, ದಿನಾಂಕ: 31/05/2025ರಲ್ಲಿ ಈ ಠಾಣೆಯೂ ಒಳಗೊಂಡಂತೆ ರಾಜ್ಯಾದ್ಯಂತ ಒಟ್ಟು 100 ಪೊಲೀಸ್ ಠಾಣೆಗಳ ಹೊಸ ಕಟ್ಟಡ ನಿರ್ಮಾಣಕ್ಕೆ ಆರ್ಥಿಕ ನೆರವು ಕೋರಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. |

**ಸಂಖ್ಯೆ: ಹೆಚ್‌ಡಿ 154 ಪಿಒಪಿ 2025**

**(ಡಾ|| ಜಿ.ಪರಮೇಶ್ವರ)**
ಗೃಹ ಸಚಿವರು.